ರಾಜ್ಯದಲ್ಲಿ ಆಂಗ್ಲ ಮಾಧ್ಯಮ ಶಾಲೆಗಳನ್ನು ತೆರೆಯುವುದು.

2358(2946)

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢ ಮಾಧ್ಯಮಿಕ ಶಾಲೆಗಳನ್ನು ತೆರೆಯಲು ಅನುಮತಿ ನೀಡಲಾಗುವುದೇ? ಹಾಗೂ ಈ ಹೊಸ ಸರ್ಕಾರ ಆಂಗ್ಲ ಮಾಧ್ಯಮ ಶಾಲೆಗಳನ್ನು ತೆರೆಯಲು ಯಾವ ಧೋರಣೆಯನ್ನು ತಾಳಿರುವುದು;

ಆ) ರಾಜ್ಯದಲ್ಲಿರುವ ಆಂಗ್ಲಮಾಧ್ಯಮ ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲೆಗಳಿಗೆ ಅನುದಾನವನ್ನು ನೀಡಲಾಗುವುದೆ? ಹಾಗೂ ಅನುದಾನವನ್ನು ಕೊಡುವುದಾದಲ್ಲಿ ಪ್ರಾರಂಭವಾದ ಎಷ್ಟು ವರ್ಷಗಳ ನಂತರ ಅನುದಾನ ಕೊಡಲಾಗುವುದು?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಹೌದು, ರಾಜ್ಯದ ಭಾಷಾ: ಶಿಕ್ಷಣ ಮಾಧ್ಯಮ ನೀತಿಯನ್ನು ಅನುಸರಿಸುವ ಮತ್ತು ಅರ್ಹತೆ ಹೊಂದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅವಶ್ಯಕತೆಗನುಗುಣವಾಗಿ ಆಂಗ್ಲ ಮಾಧ್ಯಮ ಶಾಲೆಗಳನ್ನು ತೆರೆಯಲು ಅನುಮತಿ ನೀಡಲಾಗುತ್ತದೆ.

ಆ) ಇಲ್ಲ.

ಕಿರಿಯ ಸರ್ಕಾರಿ ಮಹಿಳಾ ಕಾಲೇಜುಗಳಲ್ಲಿರುವ ಮುಸ್ಲಿಂ ಹೆಣ್ಣು ಮಕ್ಕಳ ಸಂಖ್ಯೆ.

2361(3060)

ಶ್ರೀ ಎಂ.ಜಿ.ಮುಳೆ(ಬಸವ ಕಲ್ಯಾಣ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣದಲ್ಲಿರುವ ನೀಲಾಂಬಿಕ ಸರ್ಕಾರಿ ಕಿರಿಯ ಮಹಿಳಾ ಕಾಲೇಜಿನಲ್ಲಿ ಪಿ.ಯು.ಸಿ.ಯಲ್ಲಿ ವ್ಯಾಸಂಗ ಮಾಡುತ್ತಿರುವ ಮುಸ್ಲಿಂ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು?

ಆ) ಈ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅಲ್ಪಸಂಖ್ಯಾತ ಮುಸ್ಲಿಂ ಹೆಣ್ಣುಮಕ್ಕಳ ಸಂಖ್ಯೆ ಹೆಚ್ಚಿರುವುದರಿಂದ ಇವರಿಗೆ ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ಪಿ.ಯು.ಸಿ.ಯಲ್ಲಿ ಉರ್ದು ವಿಷಯವನ್ನು ಸೇರಿಸಲಾಗಿದೆಯೇ?